# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | **551** |
| ಮಾನ್ಯ ಸದಸ್ಯರ ಹೆಸರು | ಶ್ರೀ ಯು.ಬಿ.ವೆಂಕಟೇಶ್ (ನಾಮನಿರ್ದೇಶನ ಹೊಂದಿದವರು) |
| ಉತ್ತರಿಸಬೇಕಾದ ದಿನಾಂಕ | 08.12.2023 |
| ಉತ್ತರಿಸುವ ಸಚಿವರು | ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳು ನೀಟ್ ಅಡಿಯಲ್ಲಿ ವೈದ್ಯಕೀಯ/ ಇಂಜಿನಿಯರಿಂಗ್‌ನಂತಹ ಉನ್ನತ ವ್ಯಾಸಂಗ ಮಾಡಲು ಕಾಲೇಜು ಶುಲ್ಕವು ಅತೀ ಹೆಚ್ಚಿನ ಪ್ರಮಾಣದಲ್ಲಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಸರ್ಕಾರದ ಗಮನಕ್ಕೆ ಬಂದಿದೆ. |
| ಆ) | ಹಾಗಿದ್ದಲ್ಲಿ,ಉನ್ನತ ವ್ಯಾಸಂಗಕ್ಕೆ ಪ್ರೋತ್ಸಾಹಿಸುವ ಅರಿವು ಯೋಜನೆಯ ಸಾಲದ ಮೊತ್ತವನ್ನು ಹೆಚ್ಚಳ ಮಾಡುವ ದಿಸೆಯಲ್ಲಿ ಸರ್ಕಾರ ಕೈಗೊಂಡಿರುವ ಕ್ರಮಗಳೇನು; | ಪ್ರಸ್ತುತ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಡಿ ಕಾರ್ಯನಿರ್ವಹಿಸುತ್ತಿರುವ ನಿಗಮಗಳು ಮಂಜೂರು ಮಾಡುತ್ತಿರುವ ಅರಿವು ಶೈಕ್ಷಣಿಕ ಸಾಲ ಯೋಜನೆಯಡಿಯಲ್ಲಿ ವಾರ್ಷಿಕ ಗರಿಷ್ಠ ಮಂಜೂರು ಮಾಡಲಾಗುತ್ತಿರುವ ರೂ.1.00ಲಕ್ಷಗಳ ಸಾಲವನ್ನು ರೂ.3.00ಲಕ್ಷಗಳವರೆಗೆ ಹೆಚ್ಚಳ ಮಾಡುವಂತೆ ಡಿ.ದೇವರಾಜ ಅರಸು ಅಭಿವೃದ್ಧಿ ನಿಗಮ, ಕರ್ನಾಟಕ ವೀರಶೈವ ಲಿಂಗಾಯತ ಅಭಿವೃದ್ಧಿ ನಿಗಮದಿಂದ ಪ್ರಸ್ತಾವನೆಗಳು ಸ್ವೀಕೃವಾಗಿದ್ದು, ಸರ್ಕಾರದಲ್ಲಿ ಪರಿಶೀಲನೆಯಲ್ಲಿರುತ್ತದೆ. |
| ಇ) | ಪ್ರಸ್ತುತ ಇರುವ ಸೌಲಭ್ಯವನ್ನು ಎಷ್ಟು ಮೊತ್ತಕ್ಕೆ ಏರಿಕೆ ಮಾಡಲು ಉದ್ದೇಶಿಸಿದೆ; | |
| ಈ) | ವಿದೇಶದಲ್ಲಿ ಉನ್ನತ ವ್ಯಾಸಂಗ ಮಾಡುವ ವಿದ್ಯಾರ್ಥಿಗಳಿಗೆ ನೀಡುವ ಸಾಲ ಸೌಲಭ್ಯದಂತೆ ದೇಶದಲ್ಲಿ ವೈದ್ಯಕೀಯ/ ಇಂಜಿನಿಯರಿಂಗ್ ಪದವಿ ವಿದ್ಯಾರ್ಥಿಗಳ ಸಾಲ ಸೌಲಭ್ಯವನ್ನು ಶೂನ್ಯ ಬಡ್ಡಿ ದರದಲ್ಲಿ ಕಾಲೇಜು ಶುಲ್ಕದ ಪ್ರಮಾಣವನ್ನು ಭರಿಸಲು ಸರ್ಕಾರ ಚಿಂತಿಸಿದೆಯೇ; ಈ ಬಗ್ಗೆ ಕೈಗೊಂಡಿರುವ ಕ್ರಮಗಳೇನು?(ಸಂಪೂರ್ಣ ವಿವರವನ್ನು ಒದಗಿಸುವುದು) | ಸರ್ಕಾರದ ಮುಂದೆ ಇಂತಹ ಯಾವುದೇ ಪ್ರಸ್ತಾವನೆ ಇರುವುದಿಲ್ಲ. |

**ಸಂಖ್ಯೆ: ಹಿಂವಕ 640 ಬಿಎಂಎಸ್ 2023**

**(ಶಿವರಾಜ್ ಎಸ್ ತಂಗಡಗಿ )**
ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ
ಕನ್ನಡ ಮತ್ತು ಸಂಸ್ಕೃತಿ ಸಚಿವರು